ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರ:2117/2019

ಚಾಸಾ:2 ಪ್ರಾಸಾ:2

ದಿನಾಂಕ: 12.12.2023

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಹಜ್ಮಲ್ |
| ತಂದೆಯ ಹೆಸರು | : | ಇಸ್ಮಾಯಿಲ್ |
| ವಯಸ್ಸು | : | 24 ವರ್ಷ |
| ಉದ್ಯೋಗ | : | ವಿದ್ಯಾರ್ಥಿ |
| ವಾಸ ಸ್ಥಳ | : | ಬೆಳ್ತಂಗಡಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ಚಾಸಾ-1, 3 ಮತ್ತು 4 ರವರ ಪರಿಚಯವಿಲ್ಲ. ಮೃತ ಮಹಮ್ಮದ್ ಸೋಹೆಲ್ ಪರಿಚಯವಿದೆ. ನ್ಯಾಯಾಲಯದ ಮುಂದೆ ಇರುವ ಆರೋಪಿ ನಮ್ಮ ಸಂಸ್ಥೆಯಲ್ಲಿ ಚಾಲಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ನಾನು ಅಪಘಾತವನ್ನು ನೋಡಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರು ಮಾಡಿಲ್ಲ ಮತ್ತು ಸ್ವತ್ತುಗಳನ್ನು ವಶಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿಗೆ ಸ್ಥಳ ಪಂಚನಾಮೆ ಮತ್ತು ನಕಾಶೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-3 ಮತ್ತು 4 ಎಂದು, ಅವುಗಳಲ್ಲಿನ ಸಾಕ್ಷಿಯ ಸಹಿಗಳನ್ನು ನಿಪಿ-3(ಎ) ಮತ್ತು ನಿಪಿ-4(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿಃ 21-04-2019 ರಂದು ಪೊಲೀಸರು ಅಪಘಾತ ಸ್ಥಳಕ್ಕೆ ಭೇಟಿ ನೀಡಿ ನಾನು ತೋರಿಸಿದ ಸ್ಥಳದಲ್ಲಿ ಚಾಸಾ-6, 16 ಮತ್ತು 17 ರವರ ಸಮಕ್ಷಮ 5-30 ರಿಂದ 6-15 ರವರೆಗೆ ನಿಪಿ-3 ಮತ್ತು 4 ರಂತೆ ಮಹಜರು ಮತ್ತು ನಕಾಶೆಯನ್ನು ತಯಾರಿಸಿ ಸ್ಥಳದಲ್ಲಿ ಅಪಘಾತಕ್ಕೆ ಒಳಗಾದ ವಾಹನಗಳನ್ನು ಅಮಾನತ್ತುಪಡಿಸಿಕೊಂಡು ಸದ್ರಿ ಪಂಚನಾಮೆಯನ್ನು ನನಗೆ ಓದಿ ತಿಳಿಸಿ ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ 21-04-2019 ರಂದು ಶವಪಂಚನಾಮೆ ಸಮಯದಲ್ಲಿ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ಸಾಕ್ಷಿಗೆ 2 ಪೋಟೋಗಳನ್ನು ತೋರಿಸಲಾಗಿ ಅದರಲ್ಲಿ ತಾವು ಇರುವುದಾಗಿ ನೋಡಿ ಗುರುತಿಸಿದ ಮೇರೆಗೆ ಸದ್ರಿ ಪೋಟೋಗಳನ್ನು ನಿಪಿ-6 ಮತ್ತು 7 ಎಂದು ಗುರುತಿಸಲಾಯಿತು. ಸದ್ರಿ ಪೋಟೋಗಳನ್ನು ಎಲ್ಲಿ ಮತ್ತು ಯಾವಾಗ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಪೋಟೋಗಳನ್ನು ತೋರಿಸಿ ಅವುಗಳಲ್ಲಿರುವ ವಾಹನಗಳನ್ನು ತೋರಿಸಿ ಅವುಗಳ ನಡುವೆ ಅಪಘಾತವಾಗಿದ್ದು, ಸದ್ರಿ ಅಪಘಾತವನ್ನು ನಾನು ನೋಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**